ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 10 ನೇ ಮಾರ್ಚ್, 2020

ಸಹಕಾರ ಇಲಾಖೆಯಲ್ಲಿ ಬಾಕಿ ಇರುವ ವ್ಯಾಜ್ಯಗಳ ಶೀಘ್ರ ಇತ್ಯರ್ಥ ಕುರಿತು

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ):-

514 (598) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಸಹಕಾರ ಇಲಾಖೆಯಲ್ಲಿನ ಸಹಾಯಕ ನಿಬಂಧಕರು,ಉಪ ನಿಬಂಧಕರು, ಜಂಟಿ ನಿಬಂಧಕರು ಹಾಗೂ ನಿಬಂಧಕರ ಮುಂದೆ ಇರುವ ವ್ಯಾಜ್ಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ವ್ಯಾಜ್ಯಗಳನ್ನು ಇತ್ಯರ್ಥಗೊಳಿಸಲು ತುಂಬಾ ವಿಳಂಬ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಸದರಿ ವಿಳಂಬವನ್ನು ತಡೆಗಟ್ಟಲು ಇದುವರೆವಿಗೂ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ವಿಳಂಬಕ್ಕೆ ಕಾರಣರಾದ ಎಷ್ಟು ಮಂದಿ ಅಧಿಕಾರಿಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಉ) ಜಿಲ್ಲಾ ಹಂತದಲ್ಲಿ ಸಹಕಾರಿ ನ್ಯಾಯಾಲಯಗಳನ್ನು ತೆರೆಯಲು ಸರ್ಕಾರ ಚಿಂತಿಸಿದೆಯೇ ;

(ಊ) ಹಾಗಿದ್ದಲ್ಲಿ, ಅದರ ರೂಪು ರೇಷೆಗಳೇನು ?